# Akashvani : Bangalore
# Regional Bulletin In Kannada
# 16.01.2026 / 18.40  hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧.	ತುಮಕೂರಿನಲ್ಲಿ 'ಕರ್ನಾಟಕ ಕ್ರೀಡಾಕೂಟ' ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೨.	ಗದಗ ಜಿಲ್ಲೆಯ ಲಕ್ಕುಂಡಿಯಲ್ಲಿ ಉತ್ಖನನಕ್ಕೆ ಚಾಲನೆ

೩.	ಪಠ್ಯೇತರ ಚಟುವಟಿಕೆ ನಿರ್ವಹಣೆಗಾಗಿ ವಿಟಿಯುನಿಂದ ಮೊಬೈಲ್ ಆಪ್ ಬಿಡುಗಡೆ

೪.	ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ; ರನರ್‌ಅಪ್ ಸ್ಥಾನ ಪಡೆದ ಮಂಗಳೂರು ವಿಶ್ವವಿದ್ಯಾಲಯ

<><*<><>*><>

ತುಮಕೂರಿನ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ 'ಕರ್ನಾಟಕ ಕ್ರೀಡಾಕೂಟ ೨೦೨೫-೨೬' ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಪುರುಷರ ೮೭ ಕೆ.ಜಿ ವಿಭಾಗದ ಟೇಕ್ವಾಂಡೊ ಸ್ಪರ್ಧೆಯಲ್ಲಿ ನೇಸರ ಡಿ.ಗೌಡ ಚಿನ್ನದ ಪದಕ ಗೆಲ್ಲುವ ಮೂಲಕ ಗಮನ ಸೆಳೆದರು. ಇದೇ ವೇಳೆ ಲಿಖಿತ್ ವೈ ಮತ್ತು ಜಿ.ಎಂ.ಸಾಗರ್ ಕ್ರಮವಾಗಿ ಬೆಳ್ಳಿ ಮತ್ತು ಕಂಚಿನ ಪದಕ ಗೆದ್ದುಕೊಂಡರು. ಪುರುಷರ ೬೩ ಕೆಜಿ ವಿಭಾಗದ ಸ್ಪರ್ಧೆಯಲ್ಲಿ ಎಸ್.ರಾಹುಲ್ ಮತ್ತು ಉಮೇಶ್ ಚೌಧರಿ ಅನುಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಪದಕ ಗೆದ್ದರೆ, ಮೊಹಮ್ಮದ್ ಜಿ ಹೌಸ್ ಮತ್ತು ಸಮರ್ಥ್ ಎಚ್. ಕ್ರಮವಾಗಿ ೩ ಮತ್ತು ೪ನೇ ಸ್ಥಾನ ಗಳಿಸಿದರು. ಮಹಿಳೆಯರ ೬೨ ಕೆಜಿ ವಿಭಾಗದಲ್ಲಿ ವಿ.ಹ್ಯಾಪಿ, ಅನುಶಾವಾಣಿ ಎಸ್. ಮತ್ತು ಪ್ರಿಯಾಂಕಾ ಕ್ರಮವಾಗಿ ಮೊದಲ ಮೂರು ಸ್ಥಾನಗಳನ್ನು ತಮ್ಮದಾಗಿಸಿಕೊಂಡರು. ಪುರುಷರ ೭೪ ಕೆಜಿ ವಿಭಾಗದ ಫೈನಲ್ ಸ್ಪರ್ಧೆಯಲ್ಲಿ ಶ್ರೇಯಸ್ ಜೆ., ಎಂ. ಗೌತಮ್ ಮತ್ತು ಮೊಹಮ್ಮದ್ ಜಹೀದ್ ಕ್ರಮವಾಗಿ ಚಿನ್ನ, ಬೆಳ್ಳಿ ಮತ್ತು ಕಂಚಿನ ಪದಕ ವಿಜೇತರಾದರು. ಮೆಲ್ವಿನೊ ಪಿಂಟೊ ೪ನೇ ಸ್ಥಾನ ಗಳಿಸಿದರು.

<><*<><>*><>

ವಿದ್ಯಾರ್ಥಿಗಳು ಕಲಿಕೆಯೊಂದಿಗೆ ವಿಧೇಯತೆಯನ್ನು ಮೈಗೂಡಿಸಿಕೊಂಡಾಗ ಸುಂದರ ಬದುಕು ರೂಪುಗೊಳ್ಳಲು ಸಾಧ್ಯ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನ ಸೇಂಟ್ ಅಲೋಶಿಯಸ್ ಪರಿಗಣಿತ ವಿಶ್ವವಿದ್ಯಾಲಯದಲ್ಲಿಂದು ಎಂಜಿನಿಯರಿಂಗ್ ಹಾಗೂ ಕಾನೂನು ಪದವಿ ಕೋರ್ಸ್‌ಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಶಿಕ್ಷಣ ಪಡೆದು ಹೊರಬರುವ ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಕಾನೂನು ಶಿಕ್ಷಣವು ಸಾಮಾಜಿಕ ನ್ಯಾಯ, ಸಂವಿಧಾನ ರಕ್ಷಣೆ, ಮಾನವ ಹಕ್ಕು ರಕ್ಷಣೆಯ ಬಗ್ಗೆ ಅರಿವು ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಕಾನೂನು ವಿದ್ಯಾರ್ಥಿಗಳು ಈ ಜ್ಞಾನವನ್ನು ಪಡೆದು ಸಂವಿಧಾನ ರಕ್ಷಕರಾಗಬೇಕು ಎಂದು ಕರೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಕಲ್ಪನೆಯಂತೆ ಡಿಜಿಟಲ್ ಇಂಡಿಯಾ, ಆತ್ಮ ನಿರ್ಭರ ಭಾರತ, ಸ್ಟಾರ್ಟ್ ಅಪ್‌ಗಳ ಸ್ಥಾಪನೆಗೆ ಎಂಜಿನಿಯರಿಂಗ್ ಪದವೀಧರರು ಕೊಡುಗೆ ನೀಡಬೇಕು. ಈ ಹಿಂದೆ ನಲಂದಾ, ತಕ್ಷಶಿಲಾ ವಿಶ್ವವಿದ್ಯಾನಿಲಯಗಳು ಜ್ಞಾನದ ದಾಹ ತಣಿಸುವ ಜೊತೆಗೆ ಭಾರತೀಯ ಸಂಸ್ಕೃತಿಯನ್ನು ಧಾರೆಯೆರೆಯುತ್ತಿದ್ದವು. ವಿದೇಶಿ ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಇಲ್ಲಿಗೆ ಬರುತ್ತಿದ್ದರು. ಈ ಪರಂಪರೆಯು ಪುನರಾವರ್ತನೆ ಆಗಬೇಕು ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ.

<><*<><>*><>

ಗದಗ ತಾಲೂಕಿನ ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರು ಉತ್ಖನನಕ್ಕೆ ಚಾಲನೆ ನೀಡಿದರು. ಪುರಾತತ್ವ ಇಲಾಖೆಯ ನಿವೃತ್ತ ಅಧೀಕ್ಷಕ ಹಾಗೂ ಉತ್ಖನನದ ನಿರ್ದೇಶಕ ಟಿ.ಎಂ. ಕೇಶವ ಅವರ ನೇತೃತ್ವದಲ್ಲಿ ಉತ್ಖನನ ಆರಂಭವಾಗಿದೆ. ೨೦ ಜನ ಕಾರ್ಮಿಕರಿಂದ ಉತ್ಖನನ ಕಾರ್ಯ ನಡೆಯುತ್ತಿದ್ದು, ಪ್ರಾಚೀನ ವಸ್ತುಗಳ ಬಗೆಗೆ ಉತ್ಖನನ ಮಾಡುವ ಬಗ್ಗೆ ಕಾರ್ಮಿಕರಿಗೆ ಮಾಹಿತಿ ನೀಡಿ, ನಾಜೂಕಿನಿಂದ ಉತ್ಖನನ ಪ್ರಕ್ರಿಯೆ ಮಾಡಲು ಸೂಚನೆ ನೀಡಿದರು. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಮಾತನಾಡಿ, ಸರ್ಕಾರ ಪೂರ್ವ ನಿಗದಿಯಂತೆ ಉತ್ಖನನ ಕಾರ್ಯ ಮಾಡುತ್ತಿದೆ. ಭೂಮಿಯ ಒಡಲಿನಲ್ಲಿ ಏನಿದೆ ಎಂದು ಈಗಲೇ ಹೇಳಲು ಸಾಧ್ಯವಿಲ್ಲ. ದೇವಸ್ಥಾನದ ಕುರುಹು ಇರುವ ಬಗ್ಗೆ ಪುರಾತತ್ವ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಅದರಂತೆ ಉತ್ಖನನಕ್ಕೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

<><*<><>*><>

ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್, ಆಕ್ಟಿವಿಟಿ ಪಾಯಿಂಟ್ ಅನ್ನು ಆನ್‌ಲೈನ್‌ನಲ್ಲಿ ನಿರ್ವಹಣೆ ಮಾಡುವುದಕ್ಕಾಗಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ-ವಿಟಿಯು, ಎಐಸಿಟಿಇ ಆಕ್ಟಿವಿಟಿ ಪಾಯಿಂಟ್ಸ್ ಟ್ರ್ಯಾಕಿಂಗ್ ಸಿಸ್ಟಂ ಮೊಬೈಲ್ ಆಪ್ ಬಿಡುಗಡೆ ಮಾಡಿದೆ. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸರ್.ಎಂ.ವಿಶ್ವೇಶ್ವರಯ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಆಯೋಜಿಸಿದ್ದ ಮೊಬೈಲ್ ಆಪ್ ಕಾರ್ಯಾಗಾರದಲ್ಲಿ ವಿಟಿಯು ಕುಲಪತಿ ಡಾ.ಎಸ್.ವಿದ್ಯಾಶಂಕರ್ ಬಿಡುಗಡೆ ಮಾಡಿದರು. ಈ ವೇಳೆ ಮಾತನಾಡಿದ ಅವರು, ವಿದ್ಯಾರ್ಥಿಗಳು ಜೀವನದಲ್ಲಿ ಪ್ರಾಮಾಣಿಕತೆಯನ್ನು ರೂಢಿಸಿಕೊಳ್ಳಬೇಕು. ಸಮಯವನ್ನು ವ್ಯರ್ಥ ಮಾಡದಿರಿ. ವಿದ್ಯಾರ್ಥಿಗಳಿಗೆ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆ ಕೂಡ ಬಹಳ ಮುಖ್ಯ. ಎಐಸಿಟಿಇ ಇದಕ್ಕಾಗಿ ೧೬ ಚಟುವಟಿಕೆಗಳನ್ನು ಗುರುತಿಸಿದೆ. ವಿದ್ಯಾರ್ಥಿಗಳು ಇದರಲ್ಲಿ ಭಾಗವಹಿಸುವಂತೆ ಅವರು ಸಲಹೆ ನೀಡಿದರು.

**<><*<><>*><>**

ಇಸ್ರೇಲ್ ಸರ್ಕಾರದ ‘ಮಾಶಾವ್’ ಕಾರ್ಯಕ್ರಮದ ಅಡಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಆಯ್ದ ಶಾಲೆಗಳನ್ನು ಗುರುತಿಸಿ, ಅವುಗಳಿಗೆ ಸ್ಮಾರ್ಟ್ ಬೋರ್ಡ್‌ಗಳನ್ನು ವಿತರಿಸುವ ಕಾರ್ಯಕ್ಕೆ ಚಾಲನೆ ದೊರೆತಿದೆ. ಜಿಲ್ಲೆಯ ಅನಂತಾಡಿಯ ಶಾಲೆಯಲ್ಲಿ ಜರುಗಿದ ವಿಶೇಷ ಕಾರ್ಯಕ್ರಮದಲ್ಲಿ ಇಸ್ರೇಲ್ ಕಾನ್ಸುಲ್ ಜನರಲ್ ಓರ್ಲಿ ವೈಟ್ಜ್‌ಮನ್ ಸ್ಮಾರ್ಟ್ ಬೋರ್ಡ್‌ಗಳನ್ನು ಲೋಕಾರ್ಪಣೆಗೊಳಿಸಿದರು. ಬಳಿಕ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯೊಂದಿಗೆ ಕೈಜೋಡಿಸುತ್ತಿರುವುದು ಸಂತಸದ ವಿಷಯ. ಈ ಸ್ಮಾರ್ಟ್ ಬೋರ್ಡ್‌ಗಳ ಮೂಲಕ ಡಿಜಿಟಲ್ ಶಿಕ್ಷಣಕ್ಕೆ ಹೊಸ ವೇಗ ಸಿಗಲಿದೆ. ವ್ಯಾಪಾರ ಹಾಗೂ ಸಾಂಸ್ಕೃತಿಕವಾಗಿಯೂ ಇಸ್ರೇಲ್ ಮತ್ತು ದಕ್ಷಿಣ ಕನ್ನಡದ ನಡುವಿನ ಸಂಬಂಧ ಮುಂದಿನ ದಿನಗಳಲ್ಲಿ ಇನ್ನಷ್ಟು ವೃದ್ಧಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮಾತನಾಡಿ, ಭಾರತ ಮತ್ತು ಇಸ್ರೇಲ್ ರಾಷ್ಟ್ರಗಳ ನಡುವೆ ಸುದೀರ್ಘವಾದ ಸ್ನೇಹ ಸಂಬಂಧವಿದೆ. ವಿಶೇಷವಾಗಿ ಕೃಷಿ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಉತ್ತಮ ಸಹಯೋಗ ಹೊಂದಿದ್ದೇವೆ ಎಂದು ಹೇಳಿದರು.

**<><*<><>*><>**

ಮಹಾರಾಷ್ಟ್ರದ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಬಿಜೆಪಿ ಮತ್ತು ಮಿತ್ರ ಪಕ್ಷಗಳ ಜಯಭೇರಿಯ ಹಿನ್ನೆಲೆಯಲ್ಲಿ ಬೆಂಗಳೂರಿನ ರಾಜ್ಯ ಬಿಜೆಪಿ ಕಚೇರಿಯ ಬಳಿ ಇಂದು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಲಾಯಿತು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್.ಹರೀಶ್, ಮುಂಬೈ ಮಹಾನಗರ ಪಾಲಿಕೆಯಲ್ಲಿ ಬಿಜೆಪಿ ಮತ್ತು ಮಿತ್ರಪಕ್ಷವು ಭಾರೀ ಮುನ್ನಡೆ ಸಾಧಿಸಿದೆ. ಇದು ಸಂತಸದ ವಿಚಾರ. ೩೦ ವರ್ಷಗಳ ನಂತರ ಬಿಜೆಪಿಯ ಸದಸ್ಯ ಮೇಯರ್ ಆಗಿ ಚುಕ್ಕಾಣಿ ಹಿಡಿಯುವುದು ಅತ್ಯಂತ ಖುಷಿ ತಂದಿದೆ ಎಂದು ಹೇಳಿದರು.

**<><*<><>*><>**

ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ವಿವಿಧೆಡೆ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ ೭೫ರ ಕಾಮಗಾರಿಯನ್ನು ಇಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಪರಿಶೀಲಿಸಿದರು. ಈ ವೇಳೆ ಅವರು, ಕಾರಣವಿಲ್ಲದೆ ಕಾಮಗಾರಿ ವಿಳಂಬ ಮಾಡಿದರೆ, ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಬೆಂಗಳೂರು-ಹಾಸನ-ಮಂಗಳೂರು ಪ್ರಮುಖ ವಾಣಿಜ್ಯ ಮಾರ್ಗವಾಗಿರುವುದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಅತಿ ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಅವರು ಸೂಚಿಸಿದರು.

**<><*<><>*><>**

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಉಳಿಸಲು ಇದೇ ೨೨ರಿಂದ ೩೧ರ ವರೆಗೆ ವಿಶೇಷ ಅಧಿವೇಶನ ಕರೆಯಲಾಗಿದೆ. ಕೇಂದ್ರ ಸರ್ಕಾರದ ಈ ಅನ್ಯಾಯದ ವಿರುದ್ಧ ಕಾಂಗ್ರೆಸ್ ವತಿಯಿಂದ ಆಂದೋಲನ ನಡೆಸಲು ನಿರ್ಧರಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮಹಾತ್ಮಾಗಾಂಧಿ ಹೆಸರು ತೆಗೆದು, ರಾಮ ಹೆಸರು ಇಡುವುದು ತಪ್ಪು. ಯುಪಿಎ ಸರ್ಕಾರ ೨೦೦೫ರಲ್ಲಿ ನರೇಗಾ ಜಾರಿಗೆ ತಂದಿತ್ತು. ಸಂವಿಧಾನಾತ್ಮಕವಾಗಿ ಉದ್ಯೋಗ ಹಕ್ಕನ್ನು ನೀಡಲಾಯಿತು. ಗ್ರಾಮ ಪಂಚಾಯಿತಿಗಳು ತಮ್ಮ ಅಗತ್ಯಕ್ಕನುಗುಣವಾಗಿ ಯೋಜನೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಯಿತು. ವರ್ಷಕ್ಕೆ ೧೦೦ ದಿನಗಳ ಉದ್ಯೋಗ ಭದ್ರತೆ ನೀಡಲಾಯಿತು ಎಂದು ಹೇಳಿದರು. ಬಡವರು, ರೈತರು, ಹಿಂದುಳಿದವರಿಗೆ ಅನುಕೂಲವಾಗಿತ್ತು. ಗ್ರಾಮ ಪಂಚಾಯಿತಿಗಳಿಗೆ ಆಸ್ತಿ ನಿರ್ಮಾಣವಾಯಿತು. ಜನ ಉದ್ಯೋಗಕ್ಕಾಗಿ ವಲಸೆ ಹೋಗುವುದು ತಪ್ಪಿತ್ತು ಎಂದರು. ಆದರೆ, ಕೇಂದ್ರ ಸರ್ಕಾರ, ರಾಷ್ಟ್ರವ್ಯಾಪ್ತಿ ಇದ್ದ ಯೋಜನೆಯನ್ನು ಆಯ್ದ ಗ್ರಾಮ ಪಂಚಾಯಿತಿಗಳಿಗೆ ಮಾತ್ರ ಜಿ ರಾಮ್ ಜಿ ಯೋಜನೆ ಅನುಷ್ಠಾನಕ್ಕೆ ಮುಂದಾಗಿದೆ ಎಂದು ಸಚಿವ ಎಂ.ಬಿ.ಪಾಟೀಲ್ ಆರೋಪಿಸಿದರು.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆಯ ಸ್ವರಾಜ್ ಮೈದಾನದಲ್ಲಿ ನಡೆದ ೮೫ನೇ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಸಂಪನ್ನಗೊಂಡಿದೆ. ಸತತ ಐದು ದಿನವೂ ಟ್ರ್ಯಾಕ್ ಓಟದಲ್ಲಿ

ಪಾರಮ್ಯ ಮೆರೆದ ಮದ್ರಾಸ್ ವಿಶ್ವವಿದ್ಯಾಲಯ, ೧೩೪ ಅಂಕಗಳೊಂದಿಗೆ ೮೫ನೇ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ೨೦೨೫-೨೬ರ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು. ಮಂಗಳೂರು ವಿಶ್ವವಿದ್ಯಾಲಯ, ೧೦೯ ಅಂಕಗಳೊಂದಿಗೆ ರನ್ನರ್ ಅಪ್ ಪ್ರಶಸ್ತಿ ಪಡೆಯಿತು. ಪ್ರಥಮ ಪ್ರಶಸ್ತಿ ವಿಜೇತ ತಂಡ ಪ್ರಶಸ್ತಿಯೊಂದಿಗೆ ೫೦ ಸಾವಿರ ರೂಪಾಯಿ ನಗದು ಹಾಗೂ ರನ್ನರ್ ಅಪ್ ತಂಡಕ್ಕೆ ೩೦ ಸಾವಿರ ರೂಪಾಯಿ ನಗದು ಪುರಸ್ಕಾರ ಪಡೆಯಿತು. ಪುರುಷರ ವಿಭಾಗದಲ್ಲಿ ಮದ್ರಾಸ್ ವಿಶ್ವವಿದ್ಯಾಲಯ ೭೪ ಅಂಕ, ಮಂಗಳೂರು ೬೦, ರೋಹ್ತಕ್ ಎಂಡಿಯು ವಿಶ್ವವಿದ್ಯಾಲಯ ೨೯ ಅಂಕಗಳನ್ನು ಪಡೆಯಿತು. ಮಹಿಳೆಯರ ವಿಭಾಗದಲ್ಲಿ ಚಂಡೀಗಢ ವಿಶ್ವವಿದ್ಯಾಲಯ ೬೭ ಅಂಕ, ಮದ್ರಾಸ್ ವಿಶ್ವವಿದ್ಯಾಲಯ ೪೭ ಮತ್ತು ಮಂಗಳೂರು ವಿಶ್ವವಿದ್ಯಾಲಯ ೩೮ ಅಂಕಗಳನ್ನು ಪಡೆದು ಕ್ರಮವಾಗಿ ಮೊದಲ ಮೂರು ಸ್ಥಾನ ಪಡೆಯಿತು. ಕ್ರೀಡಾಕೂಟದ ಅತ್ಯುತ್ತಮ ಅಥ್ಲೀಟ್ ಪ್ರಶಸ್ತಿಯನ್ನು ಮಹಿಳಾ ವಿಭಾಗ ಹೈಜಂಪ್‌ನಲ್ಲಿ ಲವ್ಲೀ ಪ್ರೊಫೆಷನಲ್ ವಿಶ್ವವಿದ್ಯಾಲಯದ ಪೂಜಾ ಹಾಗೂ ಪುರುಷರ ವಿಭಾಗದ ಟ್ರಿಪಲ್ ಜಂಪ್ ವಿಭಾಗದಲ್ಲಿ ಮದ್ರಾಸ್ ವಿಶ್ವವಿದ್ಯಾಲಯದ ಮೋಹನ್ ರಾಜ್ ಮತ್ತು ೨೦ ಕಿಲೋಮೀಟರ್ ನಡಿಗೆಯಲ್ಲಿ ಪಂಜಾಬ್ ಆರ್‌ಐಎಂಟಿ ವಿಶ್ವವಿದ್ಯಾಲಯದ ವಿಷ್ವೇಂದ್ರ ಸಿಂಗ್ ಪಡೆದರು. ಈ ಕ್ರೀಡಾಕೂಟದಲ್ಲಿ ಐದು ನೂತನ ಕೂಟ ದಾಖಲೆಗಳಾಗಿದ್ದು, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ವತಿಯಿಂದ ತಲಾ ೨೫ ಸಾವಿರ ರೂಪಾಯಿ ನಗದು ಬಹುಮಾನ ನೀಡಲಾಯಿತು. ೪*೪೦೦ ಮೀಟರ್ಸ್ ರಿಲೇ ಓಟದಲ್ಲಿ ಮಂಗಳೂರು ವಿಶ್ವವಿದ್ಯಾಲಯ ತಂಡ, ೧೦೦ ಮೀಟರ್ ಓಟದಲ್ಲಿ ಕೊಯಂಮುತ್ತೂರು ಭಾರತೀಯರ್ ವಿವಿಯ ಸ್ಯಾಮ್ ವಸಂತ್, ಪೋಲ್‌ವಾಲ್ಟ್‌ನಲ್ಲಿ ಗ್ವಾಲಿಯರ್ ಐಟಿಎಂ ವಿ.ವಿಯ ಕುಲ್ದೀಪ್ ಯಾದವ್, ಹೈಜಂಪ್‌ನಲ್ಲಿ ಲವ್ಲೀ ಪ್ರೊಫೆಷನ್ ವಿ.ವಿಯ ಪೂಜಾ ಹಾಗೂ ಹ್ಯಾಮರ್ ಥ್ರೋ ವಿಭಾಗದಲ್ಲಿ ಚಂಡೀಗಢ ವಿಶ್ವವಿದ್ಯಾಲಯದ ತಾನ್ಯಾ ಚೌಧರಿ ದಾಖಲೆ ಬರೆದರು.

**<><*<><>*><>**

ಸರ್ಕಾರಿ ನೌಕರರು ದೈಹಿಕವಾಗಿ ಸದೃಢರಾಗಬೇಕು. ಇದರಿಂದ ಆರೋಗ್ಯ ಉತ್ತಮವಾಗಿರುತ್ತದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ದೈಹಿಕವಾಗಿ ದೃಢತೆಯನ್ನು ಕಾಪಾಡಿಕೊಳ್ಳುವುದರಿಂದ ಮಾನಸಿಕ ಒತ್ತಡ ನಿವಾರಣೆಯಾಗುತ್ತದೆ. ಕೇವಲ ಜಿಲ್ಲಾ ಮಟ್ಟಕ್ಕೆ ಸೀಮಿತವಾಗದೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳುವ ಮೂಲಕ ರಾಜ್ಯಕ್ಕೆ ಮತ್ತು ಜಿಲ್ಲೆಗೆ ಮಾದರಿಯಾಗಬೇಕು ಎಂದರು. ಕಾರ್ಯಕ್ರಮದಲ್ಲಿ ಮಂಡ್ಯ ಶಾಸಕ ರವಿಕುಮಾರ್ ಉಪಸ್ಥಿತರಿದ್ದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**